ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ವಿಧಾನಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ     ದಿನಾಂಕ : DATE 10/11/20

## ಸಂಖ್ಯಾಬಲ ಹೆಚ್ಚಳಕ್ಕಾಗಿ ಬಿಜೆಪಿ ಪೈಪೋಟಿ । ಅಸ್ತಿತ್ವಕ್ಕಾಗಿ ಜೆಡಿಎಸ್ ಹೋರಾಟ

# ಮೇಲ್ಮನೆ 4 ಸ್ಥಾನಗಳ ಮತ ಎಣಿಕೆ ಇಂದು

10-11-2020

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಮೇಲ್ಮನೆಯಲ್ಲಿ ಸಂಖ್ಯಾಬಲ ಹೆಚ್ಚಿಸಿಕೊಳ್ಳಬೇಕಾದ ಅನಿವಾರ್ಯತೆಯಲ್ಲಿರುವ ಬಿಜೆಪಿಗೆ ನಾಲ್ಕು ಸ್ಥಾನಗಳ ಫಲಿತಾಂಶ ಮಹತ್ವದ್ದಾಗಿದೆ. ಮಂಗಳವಾರ ಎಣಿಕೆ ನಡೆಯಲಿದ್ದು, ಕೆಲ ಕ್ಷೇತ್ರಗಳಲ್ಲಿ ಎರಡನೇ ಪ್ರಾಶಸ್ತ್ಯ ಮತಗಳ ಆಧಾರದಲ್ಲಿ ಫಲಿತಾಂಶ ಘೋಷಣೆಯಾಗುವ ನಿರೀಕ್ಷೆ ಇದೆ. ನಾಲ್ಕೂ ಕ್ಷೇತ್ರಗಳ ಪೈಕಿ ಎರಡು ಜೆಡಿಎಸ್, ಒಂದು ಕಾಂಗ್ರೆಸ್, ಒಂದು ಬಿಜೆಪಿ ತೆಕ್ಕೆಯಲ್ಲಿದ್ದವು.

ಜೆಡಿಎಸ್ ತನ್ನ ಸ್ಥಾನ ಉಳಿಸಿಕೊಳ್ಳಲು ಹೋರಾಟ ನಡೆಸಿದರೆ, ಬಿಜೆಪಿ ತನ್ನ ಸ್ಥಾನದ ಜತೆಗೆ ಮೂರು ಸ್ಥಾನ ಗೆಲ್ಲಲು ಪ್ರಯತ್ನಿಸಿದೆ. ಕಾಂಗ್ರೆಸ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಜತೆಗೆ ಆಗ್ನೇಯ ಪದವೀಧರರ ಕ್ಷೇತ್ರಕ್ಕೆ ಲಗ್ಗೆ ಹಾಕಲು ಹೋರಾಟ ನಡೆಸಿತ್ತು. ಹಾಗಾಗಿ ಈ ಚುನಾವಣೆ ಮೂರೂ ಪಕ್ಷಗಳಿಗೆ ಪ್ರತಿಷ್ಠೆಯ ಪ್ರಶ್ನೆಯಾಗಿದ್ದವು. ಆದ್ದರಿಂದ ಫಲಿತಾಂಶ ಕುತೂಹಲ ಕೆರಳಿಸಿದೆ.

ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಜೆಡಿಎಸ್‌ನ ಆರ್. ಚೌಡಾರೆಡ್ಡಿ ತೂಪಲ್ಲಿ, ಕಾಂಗ್ರೆಸ್‌ನಿಂದ ರಮೇಶ್ ಬಾಬು, ಬಿಜೆಪಿಯ ಚಿದಾನಂದಗೌಡ ಕಣದಲ್ಲಿದ್ದಾರೆ.

### ಮತ ಕೇಂದ್ರಗಳು ಎಲ್ಲೆಲ್ಲಿ?

**ಪಶ್ಚಿಮ ಪದವೀಧರ ಕ್ಷೇತ್ರ: ಕೃಷಿ ವಿಶ್ವವಿದ್ಯಾಲಯ, ಯತ್ತಿನಗುಡ್ಡ, ಧಾರವಾಡ**

**ಈಶಾನ್ಯ ಶಿಕ್ಷಕರ ಕ್ಷೇತ್ರ: ಕಲಬುರಗಿ ವಿಶ್ವವಿದ್ಯಾಲಯದ ಗಣಿತ ವಿಭಾಗ, ಕಲಬುರಗಿ**

**ಬೆಂಗಳೂರು ಶಿಕ್ಷಕರ ಕ್ಷೇತ್ರ: ಸರ್ಕಾರಿ ಕಲಾ ಕಾಲೇಜು, ಬೆಂಗಳೂರು**

**ಆಗ್ನೇಯ ಪದವೀಧರರ ಕ್ಷೇತ್ರ: ಸರ್ಕಾರಿ ಕಲಾ ಕಾಲೇಜು, ಬೆಂಗಳೂರು**

ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ ಬಿಜೆಪಿಯಿಂದ ಎಸ್.ವಿ. ಸಂಕನೂರ, ಕಾಂಗ್ರೆಸ್‌ನ ಕುಬೇರಪ್ಪ ಕಣದಲ್ಲಿದ್ದರೆ, ಜೆಡಿಎಸ್ ಅಭ್ಯರ್ಥಿ ಈ ಕ್ಷೇತ್ರದಲ್ಲಿ ತಟಸ್ಥವಾಗಿದ್ದು, ಪಕ್ಷೇತರ ಅಭ್ಯರ್ಥಿ ಬಸವರಾಜ ಗುರಿಕಾರಗೆ ಜೆಡಿಎಸ್ ಬೆಂಬಲ ವ್ಯಕ್ತಪಡಿಸಿದೆ.

ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಶರಣಪ್ಪ ಮಟ್ಟೂರ, ಬಿಜೆಪಿಯ ಶಶಿಲ್ ನಮೋಶಿ, ಜೆಡಿಎಸ್‌ನಿಂದ ತಿಮ್ಮಯ್ಯ ಪುರ್ಲೆ ಕಣದಲ್ಲಿದ್ದರೆ, ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಬಿಜೆಪಿಯಿಂದ ಪುಟ್ಟಣ್ಣ, ಜೆಡಿಎಸ್‌ನಿಂದ ಎ.ಪಿ.ರಂಗನಾಥ್, ಕಾಂಗ್ರೆಸ್‌ನಿಂದ ಪ್ರವೀಣ್ ಪೀಟರ್ ಸ್ಪರ್ಧಿಸಿದ್ದಾರೆ.

ಫಲಿತಾಂಶ ಮುಂದಿನ ಚುನಾವಣೆ ದಿಕ್ಸೂಚಿಯಾಗಲಿದ್ದು, ಆಡಳಿತ ಮತ್ತು ಪ್ರತಿಪಕ್ಷಗಳ ನಾಯಕರು ತಮ್ಮ ಪ್ರತಿಷ್ಠೆಯನ್ನು ಪಣಕ್ಕಿಟ್ಟಿದ್ದರು. ಈ ಚುನಾವಣೆ ಸಿಎಂ ಬಿ.ಎಸ್. ಯಡಿಯುರಪ್ಪ, ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ, ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ಅವರಿಗೆ ಅಗ್ನಿಪರೀಕ್ಷೆಯಾಗಿದೆ. ಈ ನಾಯಕರ ರಾಜಕೀಯ ಸಾಮರ್ಥ್ಯವನ್ನು ಈ ಫಲಿತಾಂಶ ಒರೆಗೆ ಹಚ್ಚಲಿದೆ.

ವಿಧಾನಪರಿಷತ್ ಚುನಾವಣೆಯ ಫಲಿತಾಂಶ ರಾಜಕೀಯವಾಗಿ ಮಹತ್ವ ಬದಲಾವಣೆಗೆ ಕಾರಣವಾಗಲಿದೆ. ಆಡಳಿತ ಬಿಜೆಪಿ ಹೆಚ್ಚು ಸ್ಥಾನಗಳನ್ನು ಗೆದ್ದರೆ, ವಿಧಾನ ಪರಿಷತ್‌ನಲ್ಲಿ ತನ್ನ ಸಂಖ್ಯಾಬಲವನ್ನು ಹೆಚ್ಚಿಸಿಕೊಳ್ಳಲಿದೆ.